**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

ದಿನಾಂಕಃ 09 ನೇ ಜೂನ್ ತಿಂಗಳು 2026ರಂದು

**ಸಿಸಿ ನಂ.52/2026**

**ಫಿರ್ಯಾದುದಾರರುಃ** ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

– ವಿರುದ್ಧ –

**ಆರೋಪಿಃ** ಯತಿರಾಜ್.ಎಂ.ಪಿ., ಬಿನ್ ಪ್ರಭು ಪ್ರಸಾದ್.ಎಂ.ಎನ್.,
36 ವರ್ಷ, ಪ್ರೈವೇಟ್ ಕಂಪನಿಯಲ್ಲಿ ಕೆಲಸ,
ವಾಸಃ ನಂ.584, 2ನೇ ಮೇನ್, 2ನೇ ಹಂತ,
ಎಂ ಬ್ಲಾಕ್, ಕುವೆಂಪು ನಗರ, ಮೈಸೂರು ನಗರ.

**ದೋಷಾರೋಪಣೆ**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 27.12.2025ರಂದು ಸಂಜೆ 4.30 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ಸರಹದ್ದು ಹುಣಸೂರು ಪಟ್ಟಣದ ಶಿವಯ್ಯ ಇಂಡೇನ್ ಪೆಟ್ರೋಲ್ ಬಂಕ್ ಮುಂದೆ ಹಾದು ಹೋಗಿರುವ ಎನ್.ಹೆಚ್275 ಬಿ.ಎಂ.ರಸ್ತೆಯಲ್ಲಿ ಚಾಸಾ.1ವಸಂತಕುಮಾರ್ ರವರು ಮಡಿಕೇರಿ ಕಡೆಯಿಂದ ಮೈಸೂರು ಕಡೆಗೆ ಬೈಕಿನಲ್ಲಿ ಬರುತ್ತಿದ್ದಾಗ ಬೈಕ್ ನ ಸಿಗ್ನಲ್ ಹಾಕಿ ಕೈಯನ್ನು ತೋರಿಸಿ ರಸ್ತೆಯ ಎಡಭಾಗದಿಂದ ಬಲಭಾಗಕ್ಕೆ ತಿರುಗಿಸಿ ರಸ್ತೆಯ ಅಂಚಿಗೆ ಬಂದಾಗ ಆರೋಪಿಯಾದ ನೀವು ತಮ್ಮ ಕೆಎ–09/ಎಂಇ–9769 ಮಾರುತಿ ಸೆಲೆರಿಯೋ ಕಾರನ್ನು ಮೈಸೂರು ಕಡೆಯಿಂದ ಮಡಿಕೇರಿ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ.1ರವರ ಬೈಕ್ ಗೆ ಡಿಕ್ಕಿ ಮಾಡಿದ ಪರಿಣಾಮ ಚಾಸಾ.1ರವರ ಎಡ ಕಾಲಿನ ಮಂಡಿಯ ಕೆಳಗೆ (ಟಿಬಿಯಾ) ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.52/2026**

| | | |
|---|---|---|
| ಆಪಾದಿತನ ಹೆಸರು | : | ಯತಿರಾಜ್.ಎಂ.ಪಿ., |
| ತಂದೆಯ ಹೆಸರು | : | ಪ್ರಭು ಪ್ರಸಾದ್.ಎಂ.ಎನ್., |
| ವಯಸ್ಸು | : | 36 ವರ್ಷ, |
| ಉದ್ಯೋಗ | : | ಪ್ರವೈಟ್ ಕಂಪನಿಯಲ್ಲಿ ಕೆಲಸ, |
| ವಾಸಸ್ಥಳ | : | ನಂ.584, 2ನೇ ಮೇನ್, 2ನೇ ಹಂತ, ಎಂ ಬ್ಲಾಕ್, ಕುವೆಂಪು ನಗರ, ಮೈಸೂರು ನಗರ. |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 234ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಒಪ್ಪಿಕೊಳ್ಳುತ್ತೇನೆ |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 09.06.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**